**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 8818/2022**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ–ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀಮತಿ. ನಾಗಮ್ಮ ಮತ್ತು ಇತರರು

:: **ದೋಷಾರೋಪಣೆ** ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ–

1) ಶ್ರೀಮತಿ.ನಾಗಮ್ಮ ಕೋಂ ಲೇಟ್ ಮಹಾಲಿಂಗು,
ವಯಸ್ಸು ಸುಮಾರು 44 ವರ್ಷ,

2) ಶ್ರೀ.ಮಹದೇವ ಉಃ ಮಹದೇವಸ್ವಾಮಿ
ಬಿನ್ ಲೇಟ್ ಮಹಾಲಿಂಗು,
ವಯಸ್ಸು ಸುಮಾರು 28 ವರ್ಷ,

3) ಶ್ರೀ.ವಿಶ್ವ ಬಿನ್ ಲೇಟ್ ಮಹಾಲಿಂಗು,
ವಯಸ್ಸು ಸುಮಾರು 24 ವರ್ಷ,

ನಂಜನಗೂಡು ತಾಲ್ಲೂಕಿನ ದೇವೀರಮ್ಮನಹಳ್ಳಿ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ–

ಮೊದಲನೆಯದಾಗಿ ದಿನಾಂಕ 25.06.2022 ರಂದು ಬೆಳಿಗ್ಗೆ 7.30 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ದೇವೀರಮ್ಮನಹಳ್ಳಿ ಪಾಳ್ಯದ ಚಾಸಾ–1–ಶ್ರೀನಿವಾಸರವರ ಮನೆಯ ಮುಂದಿನ ಖಾಲಿ ಜಾಗದಲ್ಲಿ 1 ನೇ ಆರೋಪಿಯಾದ ನೀವು ಸಮಾನ ಉದ್ದೇಶದಿಂದ ಚಾಸಾ–2–ಶ್ರೀಮತಿ.ಜಯಶೀಲರವರ ಜೊತೆ ಜಗಳ ತೆಗೆದು, ಚಾಸಾ–2 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ–1 ರವರನ್ನು ಉದ್ದೇಶಿಸಿ "ಸೂಳೆ ಮುಂಡೆ, ಲೋಫರ್ ಮುಂಡೆ" ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ

ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-2 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-2 ರವರ ಜುಟ್ಟು ಹಿಡಿದು ಎಳೆದಾಡಿ ಮಾರಕಾಯುಧವಾದ ಕಲ್ಲಿನಿಂದ ಚಾಸಾ-2 ರವರ ಎಡಗಡೆ ತಲೆಗೆ ಸ್ವ-ಇಚ್ಛೆಯಿಂದ ಹೊಡೆದಿದ್ದಲ್ಲದೆ, 3 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-2 ರವರ ಬಲ ಭುಜಕ್ಕೆ ಮತ್ತು ಬೆನ್ನಿನ ಪಕ್ಕೆಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-2 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 3 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ "ಬೋಳಿ ಮಗನೆ, ಸೂಳೆ ಮಗನೆ" ಎಂದು ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 3 ನೇ ಆರೋಪಿಯಾದ ನೀವು ಮಾರಕಾಯುಧವಾದ ಮಚ್ಚನ್ನು ಹಿಡಿದುಕೊಂಡು ಬಂದು ಚಾಸಾ-1 ರವರನ್ನು ಉದ್ದೇಶಿಸಿ "ಬೋಳಿ ಮಗನೆ, ಸೂಳೆ ಮಗನೆ ಬಾ ಇವತ್ತು ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ" ಎಂದು ಹಾಗು "ನೀನು ಯಾವ ರೀತಿ ಮಕ್ಕಳನ್ನು ಶಾಲೆಗೆ ಕಳುಹಿಸುತ್ತೀಯಾ ನೋಡಿಕೊಳ್ಳುತ್ತೇನೆ" ಎಂದು ಜೀವಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ

ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506(ಬಿ) ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು "ಚಾಸಾ-1 ರವರ ಬಟ್ಟೆ ಬಿಚ್ಚಿರಿ ಏನು ಮಾಡುವರು ನಾನು ನೋಡಿಕೊಳ್ಳುತ್ತೇನೆ" ಎಂದು 1 ಮತ್ತು 3 ನೇ ಆರೋಪಿಗಳಿಗೆ ಅಪರಾಧಿಕ ಕೃತ್ಯವೆಸಗಲು ಕುಮ್ಮಕ್ಕು ನೀಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 114 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ರಿಂದ 3 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ರಿಂದ 3 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 14.05.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.